**<u>ಸಾಕ್ಷಿಗೆ ದಿನಾಂಕ 21-03-2024 ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ.ಜೆ.ಆರ್.ಕೆ. ವಕೀಲರಿಂದಃ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ನಾನು ದಿಃ 19-07-2018 ರ ಮೂಲ ನೊಂದಾಯಿತ ಖರೀದಿ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-1 (ಎ), ನಿಪಿ-1 (ಬಿ) ಮತ್ತು ನಿಪಿ-1 (ಸಿ) ಎಂದು ಗುರುತಿಸಲಾಯಿತು. ಅದೇ ರೀತಿ ಪ್ರತಿವಾದಿಗಳ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-1 (ಡಿ), ನಿಪಿ-1 (ಇ), ನಿಪಿ-1 (ಎಫ್) ಎಂದು ಗುರುತಿಸಲಾಯಿತು. ನಮೂನೆ 15 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನೋಟಿಸಿನ ಕಚೇರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಅಂಚೆ ಕಚೇರಿಯವರು ನೀಡಿದ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.